**ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯಃ ಉತ್ತರ ಕನ್ನಡ : ಕಾರವಾರ**

**ಸ್ಪೆಷಲ್ ಕೇಸ್ ನಂ. 3/2010**

**ದೋ.ಸಾ. : 30 ಪ್ರಾ.ಸಾ. : 13**

| | |
|---|---|
| ಸಾಕ್ಷಿಯ ಹೆಸರು | : ಕೋಟೇಶ್ವರ |
| ತಂದೆಯ ಹೆಸರು | : ಮೈಲಾ ಮಡಿವಾಳ |
| ವಯಸ್ಸು | : 65 ವರ್ಷ |
| ಉದ್ಯೋಗ | : ಕೂಲಿ |
| ವಾಸ | : ಕಾನಗೋಡ , ಸಿದ್ದಾಪುರ |

**ದಿನಾಂಕಃ 11-01-2024 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**<u>ಮುಖ್ಯ ವಿಚಾರಣೆಃ ವಿಶೇಷ ಸರಕಾರಿ ಅಭಿಯೋಜಕರಿಂದ</u>**

1. ನಾನು ಕಾನಗೋಡು ಗ್ರಾಮದಲ್ಲಿ ಹುಟ್ಟಿ ಅಲ್ಲಿಯೇ ವಾಸ ಇದ್ದೇನೆ. ನ್ಯಾಯಾಲಯದ ಮುಂದೆ ಇರುವ ಆರೋಪಿ ನನಗೆ ಪರಿಚಯ ಇದ್ದಾನೆ ಕಾರಣ ಆರೋಪಿ ನನ್ನ ಊರಿನವನು ಆಗಿದ್ದಾನೆ . ಆರೋಪಿ ನಮ್ಮ ಗ್ರಾಮ ಪಂಚಾಯತಿಯಲ್ಲಿ ಅಧ್ಯಕ್ಷ ಆಗಿದ್ದ. ಯಾವ ಸಾಲಿನಲ್ಲಿ ಎಂದು ನೆನಪಿಲ್ಲ. ನಮ್ಮ ಗ್ರಾಮದಲ್ಲಿ ಸ್ವಚ್ಛ ಗ್ರಾಮ ಯೋಜನೆಯಡಿಯಲ್ಲಿ ಶೌಚಾಲಯ ನಿರ್ಮಾಣಕ್ಕೆ ಫಲಾನುಭವಿಗಳಿಗೆ ತಲಾ ರೂ. 3,000/- ಅನ್ನು ಮಂಜೂರು ಮಾಡಲಾಗಿತ್ತು ಎಂದರೆ ಗೊತ್ತಿಲ್ಲ. ಆ ಫಲಾನುಭವಿಗಳ ಪಟ್ಟಿಯಲ್ಲಿ ನಾನೂ ಸಹ ಫಲಾನುಭವಿಯಾಗಿದ್ದೆ ಎಂದರೆ ನನಗೆ ಗೊತ್ತಿಲ್ಲ. ಸಮಿತಿ ವತಿಯಿಂದ ಸದರಿ ಯೋಜನೆಯಡಿಯಲ್ಲಿ ಶೌಚಾಲಯ ನಿರ್ಮಾಣ ಮಾಡಿದ ವಿಚಾರ ನನಗೆ ಗೊತ್ತಿಲ್ಲ. ಸರ್ಕಾರದಿಂದ ರೂ, 20,00,000/- ಮಂಜೂರು ಆ ಯೋಜನೆಯಡಿಯಲ್ಲಿ ಆಗಿದ್ದದ್ದು ನನಗೆ ಗೊತ್ತಿಲ್ಲ. ಅದರಲ್ಲಿ ಒಟ್ಟು 210 ಫಲಾನುಭವಿಗಳು ಇದ್ದದ್ದು ನನಗೆ ಗೊತ್ತಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಮಾನ್ಯ ಅಭಿಯೋಜಕರು ಅನುಮತಿಯನ್ನು ಕೇಳುತ್ತಾರೆ. ಸಾಕ್ಷಿಯ ಹೇಳಿಕೆಯನ್ನು ಗಮನಿಸಿ ಅನುಮತಿ ನೀಡಲಾಯಿತು)

**<u>ಪಾಟೀ ಸವಾಲುಃ ವಿಶೇಷ ಸರಕಾರಿ ಅಭಿಯೋಜಕರಿಂದ</u>**

2. ಪೊಲೀಸ್ ನವರ ಮುಂದೆ ನಾನು ಹೇಳಿಕೆ ಕೊಟ್ಟಿಲ್ಲ. 2001–2002 ನೇ ಸಾಲಿನಲ್ಲಿ ಕಾನಗೋಡು ಗ್ರಾಮದಲ್ಲಿ ಸ್ವಚ್ಛ ಗ್ರಾಮ ಯೋಜನೆಯಡಿಯಲ್ಲಿ ಕಾಮಗಾರಿ ಕೈಗೊಳ್ಳಲು ರೂ. 20,00,000/– ಸರ್ಕಾರದಿಂದ ಮಂಜೂರಾಗಿತ್ತು ಎಂದು ನನಗೆ ಗೊತ್ತಿದೆ ಎಂದರೆ ಸರಿಯಲ್ಲ. ನಮ್ಮ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ 210 ಫಲಾನುಭವಿಗಳಿಗೆ ವೈಯಕ್ತಿಕ ಶೌಚಾಲಯಗಳನ್ನು ಕಟ್ಟಲು ಮಂಜೂರಾತಿ ನೀಡಲಾಗಿತ್ತು ಎಂದರೆ ಗೊತ್ತಿಲ್ಲ. ನಾನೂ ಸಹ ಅದರಲ್ಲಿ ಒಬ್ಬ ಫಲಾನುಭವಿಯಾಗಿದ್ದೆ ನನ್ನ ಹೆಸರು ಆಯ್ಕೆಯಾಗಿತ್ತು ಎಂದರೆ ಗೊತ್ತಿಲ್ಲ. ಪ್ರತಿಯೊಬ್ಬ ಫಲಾನುಭವಿಗೆ ರೂ. 3,000/–ಅನ್ನು ಕೊಡಬೇಕಾಗಿತ್ತು ಎಂದರೆ ನನಗೆ ಗೊತ್ತಿಲ್ಲ. ನನಗೆ ರೂ. 3,000/– ಅನ್ನು ಕೊಟ್ಟಿಲ್ಲ ಮತ್ತು ನನಗೆ ಶೌಚಾಲಯ ಕಟ್ಟಿಸಿಕೊಟ್ಟಿಲ್ಲ ಎಂದರೆ ಹೌದು . ಈ ಪ್ರಕಾರ ನಾನು ಪೊಲೀಸ್ ನವರ ಮುಂದೆ ಹೇಳಿಕೆ ನೀಡಿಲ್ಲ. ಪೊಲೀಸ್ ನವರು ನನ್ನ ಬಳಿ ಬಂದು ಯಾವತ್ತೂ ವಿಚಾರಣೆ ಮಾಡಿಲ್ಲ. ನಿ.ಪಿ. 49 ರಂತೆ ನಾನು ಹೇಳಿಕೆಯನ್ನು ಲೋಕಾಯುಕ್ತ ಪೊಲೀಸ್ ನವರಿಗೆ ಕೊಟ್ಟಿಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಾದ ಶ್ರೀ ಜಿ ಟಿ ಎನ್ ರವರಿಂದ**

3. ನನಗೆ ವೈಯಕ್ತಿಕ ಶೌಚಾಲಯವನ್ನು ಸದರಿ ಯೋಜನೆಯಡಿಯಲ್ಲಿ ಮಂಜೂರು ಮಾಡಬೇಕೆಂದು ನಾನು ಯಾವತ್ತೂ ಅರ್ಜಿ ಕೊಟ್ಟಿಲ್ಲ.

**ಮರು ವಿಚಾರಣೆಃ – ಇಲ್ಲ –**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಸಾಕ್ಷಿಯ ಹೇಳಿಕೆಯನ್ನು ಗಣಕ ಯಂತ್ರದ ಮೂಲಕ ಬೆರಳಚ್ಚು ಮಾಡಿಸಲಾಗಿದೆ)

ಓ.ಹೇ.ಕೇ.ಸ.ಇ.

(ಡಿ.ಎಸ್. ವಿಜಯಕುಮಾರ್)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಉತ್ತರ ಕನ್ನಡ , ಕಾರವಾರ